ಪ್ರ-330 - (99)

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಎಂ.ಫಾರೂಖ್, ಇವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಉತ್ತರ.**

**ವಿಷಯ:**

ಮಂಗಳೂರು ತಾಲೂಕು, ಉಳ್ಳಾಲ ನಗರ ಸಭೆ ವ್ಯಾಪ್ತಿಯಲ್ಲಿ ಅವೈಜ್ಞಾನಿಕವಾಗಿ ಮಲಿನ ನೀರು ಶುದ್ದೀಕರಣ ಘಟಕ (STP) ಅಳವಡಿಸುತ್ತಿದ್ದು ಹಾಗೂ ವೆಟ್ವೆಲ್ ನಿರ್ಮಿಸುತ್ತಿರುವುದರಿಂದ ಅದರ ಸುತ್ತಮುತ್ತಲಿನ ಪರಿಸರ ಹಾಗೂ ಸಾರ್ವಜನಿಕರ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮದ ಕುರಿತು.

**ಉತ್ತರ:**

ಮಂಗಳೂರು ತಾಲೂಕು, ಉಳ್ಳಾಲ ನಗರ ಸಭೆ ವ್ಯಾಪ್ತಿಯಲ್ಲಿ ಅವೈಜ್ಞಾನಿಕವಾಗಿ ಮಲಿನ ನೀರು ಶುದ್ದೀಕರಣ ಘಟಕ (STP) ಅಳವಡಿಸುತ್ತಿದ್ದು ಹಾಗೂ ವೆಟ್ವೆಲ್ ನಿರ್ಮಿಸುತ್ತಿರುವುದರಿಂದ ಅದರ ಸುತ್ತಮುತ್ತಲಿನ ಪರಿಸರ ಹಾಗೂ ಸಾರ್ವಜನಿಕರ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮ ಕುರಿತು ಹಿಂದಿನ ಅಧಿವೇಶನದಲ್ಲಿ ಸಂಪೂರ್ಣ ಮಾಹಿತಿಯನ್ನು ನೀಡಲಾಗಿರುತ್ತದೆ. ಈ ಕುರಿತು ಅಧಿವೇಶನದಲ್ಲಿ ಚರ್ಚೆಯಾದಂತೆ ಮುಂದುವರೆದು, ದಿನಾಂಕ:23-09-2021 ರಂದು ಮಾನ್ಯ ನಗರಾಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ ಮಾನ್ಯ ಶಾಸಕರು, ಮಾನ್ಯ ವಿಧಾನ ಪರಿಷತ್ ಸದಸ್ಯರು, ಮಂಡಳಿ ಹಾಗೂ ಪುರಸಭೆ ಅಧಿಕಾರಿಗಳು, ಹಾಗೂ ಐ.ಐ.ಟಿ ಮುಂಬೈ ಪ್ರೊಫೆಸರ್ ಇವರುಗಳೊಂದಿಗೆ ನಡೆದ ಸಭೆಯಲ್ಲಿ ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ಐ.ಐ.ಟಿ ಮುಂಬೈ ರವರು ಸಿದ್ದಪಡಿಸಿರುವ ಎಸ್.ಬಿ.ಟಿ ತಾಂತ್ರಿಕತೆಯ ಬಗ್ಗೆ ಪವರ್ ಪಾಯಿಂಟ್ ಮೂಲಕ ಪ್ರಸ್ತುತಿ ಪಡಿಸಲಾಗಿ ಹಾಗೂ ಈ ತಾಂತ್ರಿಕತೆಯನ್ನು ಅಳವಡಿಸಿಕೊಂಡು ಸಂಸ್ಕರಣಾಗಾರವನ್ನು ನಿರ್ಮಿಸಲಾಗುತ್ತಿದ್ದು, ಇದು ಪರಿಸರದ ಮೇಲೆ ಯಾವುದೇ ದುಷ್ಪರಿಣಾಮ ಉಂಟುಮಾಡುವುದಿಲ್ಲ ಎಂದು ಮೇಲಿನ ಸಭೆಗೆ ಎಲಾ ವಿವರಗಳನ್ನು ಒದಗಿಸಲಾಗಿತ್ತು. ಈ ಕುರಿತು ಮಾನ್ಯ ಶಾಸಕರು ಹಾಗೂ ಮಾನ್ಯ ವಿಧಾನ ಪರಿಷತ್ ಸದಸ್ಯರುಗಳು ಉಳ್ಳಾಲಕ್ಕೆ ಒಳಚರಂಡಿ ವ್ಯವಸ್ಥೆ ನಿರ್ಮಾಣ ಅವಶ್ಯವೆಂದು ಅಭಿಪ್ರಾಯಪಟ್ಟಿರುತ್ತಾರೆ. ಈ ಸಂದರ್ಭದಲ್ಲಿ ಖುದ್ದು ಎಸ್.ಟಿ.ಪಿ ಹಾಗೂ ವೆಟ್‌ವೆಲ್‌ಗಳ ನಿರ್ಮಿಸುತ್ತಿರುವ ಸ್ಥಳ ಪರಿವೀಕ್ಷಣೆ ಮಾಡಿ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಲಾಗಿತ್ತು. ಸಮಯದ ಅಭಾವದಿಂದ ಸ್ಥಳ ವೀಕ್ಷಣೆಯನ್ನು ಮಾಡಲಾಗಿರುವುದಿಲ್ಲ. ಆದ್ದರಿಂದ, ಆದಷ್ಟು ಬೇಗ ಸ್ಥಳ ವೀಕ್ಷಣೆ ಮಾಡಿ ಮುಂದಿನ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ನಅಇ 225 ಯುಎಂಎಸ್ 2021

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು